**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -6068/2025**
**ಚಾಸಾ - 01 / ಪ್ರಾಸಾ - 01**

| | |
|---|---|
| ಹೆಸರು | **ಲಿಯಾಕತ್ ಉಲ್ಲಾ** |
| ತಂದೆಯ ಹೆಸರು | **ನಸ್ರತ್ ಉಲ್ಲಾ ಖಾನ್** |
| ವಯಸ್ಸು | **38** |
| ಉದ್ಯೋಗ | ಗುಜರಿ ವ್ಯಪಾರ |
| ವಿಳಾಸ | **ಕೆಂಗೇರಿ** |

**ದಿನಾಂಕಃ 13-02-2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿಯು ಗೊತ್ತು. ಆರೋಪಿಯು ನನ್ನ ಸ್ನೇಹಿತರು. ಮೃತ ವ್ಯಕ್ತಿಯು ನನ್ನ ಸ್ನೇಹಿತರು. ನಾನು ಖಾಸಗಿ ಕೆಲಸದ ನಿಮಿತ್ತ ಪೋ. ಠಾಣೆಗೆ ಹೋಗಿದ್ದಾಗ ಪೋಲೀಸರು ನನ್ನಿಂದ ಕೆಲವು ಖಾಲಿ ಹಾಳೆಗಳ ಮೇಲೆ ಸಹಿಯನ್ನು ಪಡೆದುಕೊಂಡರು. ಈಗ ಸಾಕ್ಷಿಗೆ ದೂರನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ದೂರನ್ನು ನಿಪಿ-1 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಈಗ ಸಾಕ್ಷಿಗೆ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ-2 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನನಗೆ ನಿಪಿ-2ಕ್ಕೆ ನನ್ನ ಜೊತೆ ಬೇರೆ ಯಾರು ಸಹಿಯನ್ನು ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಪೋಲೀಸರು ಯಾವುದೇ ವಾಹನಗಳನ್ನು ವಶಪಡಿಸಿಕೊಂಡಿರುವುದಿಲ್ಲ. ನನಗೆ ನಿಪಿ-1 ಮತ್ತು 2ರಲ್ಲಿ ಇರುವ ವಿಷಯದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಮುಂದುವರೆದ ಹೇಳಿಕೆಯನ್ನು ನೀಡಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು. ನಾನು ಮತ್ತು ಅವರು ಪುರಸ್ಕರಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.23-09-2025 ರಂದು ಸಂಜೆ ಸುಮಾರು 6.30 ಗಂಟೆ ಸಮಯದಲ್ಲಿ ನಿಮ್ಮ ತಂದೆಯವರು ಆರೋಪಿಯ ದ್ವಿ ಚಕ್ರ ವಾಹನ ಸಂ.ಕೆಎ-41-ಇಜೆಡ್-7514 ನ್ನು ಚಾಲನೆ ಮಾಡಿಕೊಂಡು ಹಿಂಭಾಗದಲ್ಲಿ ನಿಮ್ಮ ತಂದೆಯವರನ್ನು ಕೂರಿಸಿಕೊಂಡು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಸಡನ್ನಾಗಿ ಬ್ರೇಕ್ ಹಾಕಿದ್ದರಿಂದ ನಿಮ್ಮ ತಂದೆಯವರನ್ನು ಬೀಳಿಸಿ ಅಪಘಾತ ಮಾಡಿದ್ದರಿಂದ ಇಬ್ಬರು ಕೆಳಗೆ ಬಿದ್ದು, ಏಟಾಗಿರುತ್ತದೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಮ್ಮ ತಂದೆಯವರನ್ನು ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯ ಆಸ್ಪತ್ರೆಗೆ ಕರೆದುಕೊಂಡು ಹೋಗಿ ವೈದ್ಯರಲ್ಲಿ ಚಿಕಿತ್ಸೆ ಕೊಡಿಸುತ್ತಿದ್ದಾಗ ದಿ.24-09-2025 ರಂದು ಬೆಳಗ್ಗಿನ ಜಾವ ಸುಮಾರು 2.10ಕ್ಕೆ ನಿಮ್ಮ ತಂದೆಯವರು ಮೃತ ಪಟ್ಟಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿದಂತೆ ನೀವು ದಿ.24-09-2025 ರಂದು ನಿಪಿ-1ರಂತೆ ದೂರನ್ನು ನೀಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಸಾಕ್ಷಿಗೆ ತಾನು ನೀಡಿರುವ ಮುಂದುವರೆದ ಹೇಳಿಕೆಯ ಭಾಗವಾದ " ನಂತರ ನಾನು ನನ್ನ ತಂದೆಗೆ –--------------- ಕ್ರಮ ಜರುಗಿಸಬೇಕೆಂದು ಕೋರುತ್ತೇನೆ ” ಓದಿ ತಿಳಿಸಲಾಯಿತು. ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು.

ದಿ.25-09-2025 ರಂದು ಮಧ್ಯಾಹ್ನ 3.15 ರಿಂದ 4 ಗಂಟೆ ಸಮಯದಲ್ಲಿ ನೀವು ತೋರಿಸಿದ ಜಾಗದಲ್ಲಿ ಪೋಲೀಸರು ನಿಪಿ-2ರಂತೆ ಪಂಚನಾಮೆಯನ್ನು ಮಾಡಿ ನಿಮ್ಮ, ಚಾಸಾ-6 ಮತ್ತು ಚಾಸಾ-7ರವರ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಈ ಮೇಲೆ ಹೇಳಿರುವ ವಾಹನ ನ್ನು ವಶಪಡಿಸಿಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಒಂದು ಕಚ್ಚಾ ನಕ್ಷೆಯನ್ನು ತಯಾರು ಮಾಡಿದ್ದರು ಎಂದರೆ ಸಾಕ್ಷಿಯು

ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಪಾಟೀ **ಸವಾಲುಃ- ಆರೋಪಿಯ ಪರ ಶ್ರೀಮತಿ. ಎಲ್. ಎಂ. ಆರ್, ವಕೀಲರಿಂದಃ-**

ಆರೋಪಿಯ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**